**Bangalore**
**Regional News**
**11.05.2024 / 1840 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ವಿಧಾನಪರಿಷತ್ ಚುನಾವಣೆ ; ನಾಳೆ ಬಿಜೆಪಿ ಅಭ್ಯರ್ಥಿಗಳ ಹೆಸರು ಪ್ರಕಟ

೨. ಮೂರನೇ ಹಂತದ ಲೋಕಸಭಾ ಚುನಾವಣೆ - ರಾಜ್ಯದ ೧೪ ಕ್ಷೇತ್ರಗಳಲ್ಲಿ ಶೇಕಡ ೭೧.೮೪ ರಷ್ಟು ಮತದಾನ ; ಪರಿಷ್ಕೃತ ದಾಖಲೆ ಪ್ರಕಟಿಸಿದ ಚುನಾವಣಾ ಆಯೋಗ

೩. ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ ಧಾರಾಕಾರ ಮಳೆ ; ಜನಜೀವನ ಅಸ್ತವ್ಯಸ್ತ

೪. ಐಪಿಎಲ್ ಕ್ರಿಕೆಟ್ ಟೂರ್ನಿ ; ಈಡನ್ ಗಾರ್ಡನ್ಸ್‌ನಲ್ಲಿಂದು ಮುಂಬೈ ಇಂಡಿಯನ್ಸ್-ಕೊಲ್ಕೊತ್ತಾ ನೈಟ್ ರೈಡರ್ಸ್ ಹಣಾಹಣಿ

<><*<><>*><>

ರಾಜ್ಯದಲ್ಲಿ ನಡೆದ ೨ನೇ ಹಂತದ ಲೋಕಸಭಾ ಚುನಾವಣೆಯ ಕುರಿತು ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿಂದು ಬಿಜೆಪಿ ಉನ್ನತ ಮಟ್ಟದ ನಾಯಕರ ಚುನಾವಣಾ ಅವಲೋಕನ ಸಭೆ ನಡೆಯಿತು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್, ಜೂನ್ ೩ರಂದು ನಡೆಯುವ ವಿಧಾನಪರಿಷತ್ತಿನ ಎಲ್ಲ ಕ್ಷೇತ್ರಗಳನ್ನು ಗೆಲ್ಲುವ ವಿಶ್ವಾಸವಿದೆ ಎಂದು ಹೇಳಿದರು. ನಾಳೆಯೊಳಗೆ ಕೇಂದ್ರ ಚುನಾವಣಾ ಸಮಿತಿಯು ಅಭ್ಯರ್ಥಿಗಳನ್ನು ಪ್ರಕಟಿಸಲಿದೆ ಎಂದು ತಿಳಿಸಿದರು. ಜೆಡಿಎಸ್ ಜೊತೆ ಬಿಜೆಪಿಗೆ ಹೊಂದಾಣಿಕೆ ಕೊರತೆಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.

<><*<><>*><>

ದೇಶಾದ್ಯಂತ ೯೩ ಕ್ಷೇತ್ರಗಳಲ್ಲಿ ನಡೆದ ಮೂರನೇ ಹಂತದ ಲೋಕಸಭಾ ಚುನಾವಣೆಯಲ್ಲಿ ಶೇಕಡ ೬೫.೬೮ರಷ್ಟು ಮತದಾನವಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಶೇಕಡ ೬೬.೮೯ರಷ್ಟು ಪುರುಷರು ಹಾಗೂ ಶೇಕಡ ೬೪.೪೧ರಷ್ಟು ಮಹಿಳಾ ಮತದಾರರು, ತೃತೀಯ ಲಿಂಗಿಗಳ ಪೈಕಿ ಶೇಕಡ ೨೫.೨ ರಷ್ಟು ಮಂದಿ ತಮ್ಮ ಹಕ್ಕು ಚಲಾಯಿಸಿದ್ದಾರೆ. ರಾಜ್ಯದ ೧೪ ಕ್ಷೇತ್ರಗಳಲ್ಲಿ ಶೇಕಡ ೭೧.೮೪ ರಷ್ಟು ಮತದಾನವಾಗಿದೆ ಎಂದು ಆಯೋಗ ಹೇಳಿದೆ. ರಾಜ್ಯದ ಬಾಗಲಕೋಟೆಯಲ್ಲಿ ಶೇಕಡ ೭೨.೬೬, ಬೆಳಗಾವಿಯಲ್ಲಿ ೭೧.೪೯, ಬಳ್ಳಾರಿಯಲ್ಲಿ ೭೩.೫೯, ಬೀದರ್‌ನಲ್ಲಿ ೬೫.೪೭, ವಿಜಯಪುರದಲ್ಲಿ ೬೬.೩೨, ಚಿಕ್ಕೋಡಿಯಲ್ಲಿ ೭೮.೬೬, ದಾವಣಗೆರೆಯಲ್ಲಿ ೭೬.೯೯, ಧಾರವಾಡದಲ್ಲಿ ೭೪.೩೭, ಕಲಬುರಗಿಯಲ್ಲಿ ೬೨.೨೫, ಹಾವೇರಿಯಲ್ಲಿ ೭೭.೬೦, ಕೊಪ್ಪಳದಲ್ಲಿ ೭೦.೯೯, ರಾಯಚೂರು ೬೪.೬೬, ಶಿವಮೊಗ್ಗ ೭೮.೩೩ ಹಾಗೂ ಉತ್ತರಕನ್ನಡದಲ್ಲಿ ೭೬.೫೩ ಮತದಾನವಾಗಿದೆ ಎಂದು ಆಯೋಗ ಸ್ಪಷ್ಟಪಡಿಸಿದೆ.

<><*<><>*><>

ಹುಬ್ಬಳ್ಳಿ-ಧಾರವಾಡ ಅವಳಿನಗರ ಸೇರಿದಂತೆ ವಿವಿಧೆಡೆ ಇಂದು ಭಾರಿ ಮಳೆಯಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಗುಡುಗು-ಸಿಡಿಲು, ಗಾಳಿ ಸಮೇತ ಸುರಿದ ಆಲಿಕಲ್ಲು ಮಳೆಗೆ ಮರಗಳು ಧರೆಗುರುಳಿ ಕೆಲವಡೆ ವಾಹನಗಳು ಜಖಂಗೊಂಡಿವೆ. ಗಾಳಿಯ ರಭಸಕ್ಕೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಟ್ರಾನ್ಸ್‌ಫಾರ್ಮರ್ ಸುಟ್ಟು ಹೋಗಿದೆ. ಕೆಲ ಬಡಾವಣೆಗಳಲ್ಲಿ ಮರಗಳು ರಸ್ತೆಗೆ ಬಿದ್ದಿದ್ದರಿಂದ ವಾಹನ ಸಂಚಾರ ಅಸ್ತವ್ಯಸ್ತವಾಗಿತ್ತು. ಕೆಲವೆಡೆ ವಿದ್ಯುತ್ ಕಂಬಗಳು ಬಿದ್ದ ಪರಿಣಾಮ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಮಾರುಕಟ್ಟೆ ಪ್ರದೇಶದ ಇಕ್ಕೆಲಗಳಲ್ಲಿ ನಿಲ್ಲಿಸಿದ್ದ ಬೈಕ್‌ಗಳು ನೀರಿನಲ್ಲಿ ಮುಳುಗಿದ್ದವು. ಹಳೆ ಹುಬ್ಬಳ್ಳಿ ಗಾರ್ಡನ್ ಪೇಟ, ಅಂಬೇಡ್ಕರ್ ಕಾಲೊನಿ ಸೇರಿದಂತೆ ಹಲವು ಕಡೆಗಳಲ್ಲಿ ಮನೆಗಳಿಗೆ ನೀರು ನುಗ್ಗಿದೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ.

**<><*<><>*><>**

ವಿಜಯಪುರ ನಗರದ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ಕೈಗೊಂಡ ಪ್ರಯತ್ನ ಫಲ ನೀಡಿದ್ದು, ಈಗ ಭೂತನಾಳ ಕೆರೆಗೆ ನೀರು ಹರಿದು ಬರುತ್ತಿದೆ. ಭೀಕರ ಬರ ಹಾಗೂ ಬೇಸಿಗೆ ಇರುವುದರಿಂದ ಕಾಲುವೆಗಳ ಮೂಲಕ ಕುಡಿಯುವ ನೀರು ಪೂರೈಸಲು ಸಚಿವರು ಒಂದು ತಿಂಗಳಿನಿಂದ ನಿರಂತರವಾಗಿ ಜಿಲ್ಲಾಧಿಕಾರಿಗಳ ಮೂಲಕ ಪ್ರಾದೇಶಿಕ ಆಯುಕ್ತರಿಗೆ ಕೋರಿದ್ದರು.  ಅದಕ್ಕೆ ಆಯುಕ್ತರು ಸ್ಪಂದಿಸಿದ್ದು, ಚುನಾವಣೆ ಆಯೋಗದ ಅನುಮತಿ ಪಡೆದು ನೀರು ಬಿಡುಗಡೆ ಮಾಡಲು ಆದೇಶ ನೀಡಿದ್ದಾರೆ.  ಈಗ ಜಿಲ್ಲೆಯ ಆಲಮಟ್ಟಿ ಜಲಾಶಯದಿಂದ ತಿಡಗುಂದಿ ಅಕ್ವಾಡಕ್ಟ್ ಕಾಲುವೆ ಮೂಲಕ ಭೂತನಾಳ ಕೆರೆಗೆ ನೀರು ಹರಿಸಲಾಗುತ್ತಿದೆ. ಈಗ ಭೂತನಾಳ ಕೆರೆಯಿಂದ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ಸಂಖ್ಯೆ ೪, ೫, ೬, ೧೦ ಮತ್ತು ೧೨ರ ನಿವಾಸಿಗಳಿಗೆ ಬೇಸಿಗೆ ಮುಗಿಯುವ ವರೆಗೆ ಸಮರ್ಪಕವಾಗಿ ನೀರು ಪೂರೈಕೆಯಾಗಲಿದೆ. ಈ ಮುಂಚೆಯೂ ನಗರದಲ್ಲಿ ನೀರಿನ ಸಮಸ್ಯೆ ಪರಿಹರಿಸಲು ತಿಡಗುಂದಿ ಕಾಲುವೆಯಿಂದ ಭೂತನಾಳ ಕೆರೆ ತುಂಬಿಸಿ, ನಗರದಲ್ಲಿ ಸಮಪರ್ಕವಾಗಿ ಕುಡಿಯುವ ನೀರು ಪೂರೈಸಲಾಗಿತ್ತು. ಈಗ ಮತ್ತೆ ಭೂತನಾಳ ಕೆರೆಗೆ ಹಾಗೂ ಬಹುಹಳ್ಳಿ ಕುಡಿಯುವ ನೀರು ಸರಬರಾಜು ಯೋಜನೆಯಡಿ ತಿಡಗುಂದಿ ಅಕ್ವಾಡಕ್ಟ್ ಕಾಲುವೆ ಮೂಲಕ ಇದೇ ೨೮ರ ವರೆಗೆ ನೀರು ಹರಿಸಲಾಗುತ್ತಿದೆ ಎಂದು ಸಚಿವರ ಕಚೇರಿಯ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

**<><*<><>*><>**

ವಿಜಯಪುರದ ನಾರಾಯಣಪುರ ಜಲಾಶಯದಿಂದ ಐಬಿಸಿ ಹಾಗೂ ಐಎಲ್‌ಐ ಕಾಲುವೆಗಳ ಮೂಲಕ ಮತ್ತು ಆಲಮಟ್ಟಿ ಜಲಾಶಯದಿಂದ ಮುಳವಾಡ ಏತ ನೀರಾವರಿ ಯೋಜನೆ ಹಾಗೂ ಚಿಮ್ಮಲಗಿ ಏತ ನೀರಾವರಿ ಯೋಜನೆಯ ಕಾಲುವೆಗಳ ಮೂಲಕ ಬಹುಹಳ್ಳಿ ಕುಡಿಯುವ ನೀರಿನ ಕೆರೆಗಳಿಗೆ ಹಾಗೂ ಇತರೆ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಈ ಅವಧಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಆದೇಶ ಹೊರಡಿಸಿದ್ದಾರೆ.  ನಿಷೇಧಾಜ್ಞೆ ಸಂದರ್ಭದಲ್ಲಿ ಕಾಲುವೆ ವ್ಯಾಪ್ತಿಯ ಎಡ-ಬಲ ೧೦೦ ಅಡಿ ಸುತ್ತಮುತ್ತಲಿನ ಪ್ರದೇಶದಲ್ಲಿ ಹಾಗೂ ಕೆರಗಳ ಸುತ್ತ ೧೦೦ ಅಡಿಯಲ್ಲಿ ಸಾರ್ವಜನಿಕರು ಗುಂಪು ಗುಂಪಾಗಿ ಓಡಾಡುವುದನ್ನು ನಿಷೇಧಿಸಲಾಗಿದೆ.  ಕೆರೆ ಮತ್ತು ಕಾಲುವೆಗಳಿಂದ ಅಕ್ರಮ ಪಂಪ್‌ಸೆಟ್ ಮೂಲಕ ನೀರು ಉಪಯೋಗಿಸಕೂಡದು.  ಅಕ್ರಮವಾಗಿ ಪಂಪ್‌ಸೆಟ್ ಮೂಲಕ ನೀರನ್ನು ಬಳಸುತ್ತಿದ್ದಲ್ಲಿ ಅಂತಹ ಪಂಪಸೆಟ್‌ಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ವಶಕ್ಕೆ ಪಡೆಯಲಾಗುವುದು ಎಂದು ತಿಳಿಸಲಾಗಿದೆ.

<><*<><>*><>

ಚಾಮರಾಜನಗರ ಜಿಲ್ಲೆಯಲ್ಲಿ ಬರ ನಿರ್ವಹಣೆ ಸಂಬಂಧ ೨೦೨೩ರ ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿಯಿಂದ ಉಂಟಾದ ಬೆಳೆ ಹಾನಿ ಪರಿಹಾರ ಪಾವತಿಸುವ ಬಗ್ಗೆ ರೈತರಿಗೆ ಮಾಹಿತಿ ನೀಡಲು ಸಹಾಯವಾಣಿ ಕೇಂದ್ರವನ್ನು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ತೆರೆಯಲಾಗಿದೆ. ಅರ್ಹ ಫಲಾನುಭವಿ ರೈತರಿಗೆ ಈಗಾಗಲೇ ಪಾವತಿಯಾಗಿರುವ ಬೆಳೆಹಾನಿ ಪರಿಹಾರದ ವಿವರಗಳನ್ನು ಹಾಗೂ ಅರ್ಹತೆಗನುಗುಣವಾಗಿ ನಿಯಮಾನುಸಾರ ಪ್ರಸ್ತುತ ಪಾವತಿಯಾಗುತ್ತಿರುವ ಇನ್ನುಳಿದ ಬಾಕಿ ಬೆಳೆ ಹಾನಿ ಪರಿಹಾರದ ಮೊತ್ತದ ವಿವರಗಳ ಮಾಹಿತಿಯನ್ನು ರೈತರಿಗೆ ನೀಡಲಾಗುತ್ತಿದೆ. ಉಪವಿಭಾಗಾಧಿಕಾರಿಗಳ ಕಚೇರಿ, ತಹಶೀಲ್ದಾರರ ಕಚೇರಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದೆ. ಸಾರ್ವಜನಿಕರು ಹಾಗೂ ರೈತರು ಸಹಾಯವಾಣಿ ಕೇಂದ್ರಗಳ ಸದುಪಯೋಗ ಪಡೆಯುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಇತ್ತೀಚೆಗೆ ನಿಧನ ಹೊಂದಿದ್ದ ಹಿರಿಯ ರಾಜಕೀಯ ಮುತ್ಸದ್ದಿ ಶ್ರೀನಿವಾಸ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಮತ್ತು ನುಡಿನಮನ ಕಾರ್ಯಕ್ರಮ ಮೈಸೂರಿನಲ್ಲಿ ನಡೆಯಿತು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶ್ರೀನಿವಾಸ ಪ್ರಸಾದ್ ಮನುಷ್ಯತ್ವ ಹಾಗೂ ಸಂವಿಧಾನದಲ್ಲಿ ನಂಬಿಕೆ ಇರಿಸಿದ್ದ ಸಜ್ಜನ ವ್ಯಕ್ತಿಯಾಗಿದ್ದರು ಎಂದು ಹೇಳಿದರು. ಮನುಷ್ಯ, ಮನುಷ್ಯರನ್ನು ಪರಸ್ಪರ ಗೌರವಿಸಬೇಕೆ ಹೊರತು ದ್ವೇಷಿಸಬಾರದು ಎಂದು ತಿಳಿಸಿದರು.

<><*<><>*><>

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ಕನಿಷ್ಟ ೨೦ ಕ್ಷೇತ್ರಗಳಲ್ಲಿ ಗೆಲ್ಲಲಿದೆ ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಒಂದು ಲಕ್ಷ ಮತಗಳ ಅಂತರದಿಂದ ಜಯಗಳಿಸಲಿದ್ದಾರೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಮತದಾರರ ಮನಗೆದ್ದಿದೆ ಎಂದು ತಿಳಿಸಿದ್ದಾರೆ. ಜೆಡಿಎಸ್ ಪಕ್ಷದ ಅನೇಕ ಮುಖಂಡರು ತಮ್ಮ ಪಕ್ಷದ ಜೊತೆ ಸಂಪರ್ಕದಲ್ಲಿದ್ದು, ಶೀಘ್ರವೇ ಕಾಂಗ್ರೆಸ್ ಸೇರಲಿದ್ದಾರೆ ಎಂದು ಹೇಳಿದರು.

<><*<><>*><>

೨೦೨೩ ರ ಮುಂಗಾರು ಹಂಗಾಮಿನಲ್ಲಿ ತೀವ್ರ ಮಳೆ ಕೊರತೆಯಿಂದ ಬೆಳೆ ನಷ್ಟವಾದ ದಾವಣಗೆರೆ ಜಿಲ್ಲೆಯ ೮೨ ಸಾವಿರದ ೯೨೮ ರೈತರಿಗೆ ಮೊದಲ ಕಂತಿನಲ್ಲಿ ಗರಿಷ್ಠ ೨ ಸಾವಿರ ರೂಪಾಯಿ ವರೆಗೆ ಹಾಗೂ ಬಾಕಿ ಇದ್ದ ರೈತರಿಗೆ ಒಟ್ಟು ೬೦ ಕೋಟಿ ೨೩ ಲಕ್ಷ ೪೬ ಸಾವಿರದ ೩೮೦ ರೂಪಾಯಿಗಳನ್ನು ನೇರವಾಗಿ ರೈತರ ಖಾತೆಗೆ ಪಾವತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ೨೦೨೩ ರ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ೧ ಲಕ್ಷ ೫೦ ಸಾವಿರದ ೬೨೧ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದೆ ಎಂದು ಸರ್ಕಾರಕ್ಕೆ ವರದಿ ನೀಡಲಾಗಿತ್ತು. ಎಸ್‌ಡಿಆರ್‌ಎಫ್ ಹಾಗೂ ಎನ್‌ಡಿಆರ್‌ಎಫ್ ಮಾರ್ಗಸೂಚಿನ್ವಯ ಅರ್ಹ ರೈತರಿಗೆ ಗರಿಷ್ಠ ೨ ಸಾವಿರ ರೂಪಾಯಿವರೆಗೆ ೮೨ ಸಾವಿರದ ೯೨೮ ರೈತರಿಗೆ ೧೫ ಕೋಟಿ ೮೮ ಲಕ್ಷ ೧೫ ಸಾವಿರದ ೩೮೦

ರೂಪಾಯಿಗಳನ್ನು ಮೊದಲ ಕಂತಾಗಿ ಪಾವತಿಸಲಾಗಿತ್ತು ಎಂದು ತಿಳಿಸಿದ್ದಾರೆ. ಸರ್ಕಾರದ ಮಾರ್ಗಸೂಚಿನ್ವಯ ಪರಿಹಾರ ನೀಡಲು ಬಾಕಿ ಇದ್ದ ಮೊತ್ತವನ್ನು ಜಿಲ್ಲೆಯ ೬೯ ಸಾವಿರದ ೫೭೫ ರೈತರಿಗೆ ೪೪ ಕೋಟಿ ೩೫ ಲಕ್ಷ ೩೧ ಸಾವಿರ ರೂಪಾಯಿಗಳನ್ನು ನೇರವಾಗಿ ರೈತರ ಖಾತೆಗೆ ಪಾವತಿ ಮಾಡಲಾಗಿದೆ. ಒಟ್ಟಾರೆ ಜಿಲ್ಲೆಯಲ್ಲಿ ಇದುವರೆಗೆ ೬೦ ಕೋಟಿ ೨೩ ಲಕ್ಷ ೪೬ ಸಾವಿರದ ೩೮೧ ರೂಪಾಯಿ ಪಾವತಿಸಲಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಉಡುಪಿ ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಈಗಾಗಲೇ ಜಿಲ್ಲಾಡಳಿತದಿಂದ ನಿರ್ದೇಶನ ನೀಡಲಾಗಿದೆ. ಈ ಸಮಯದಲ್ಲಿ ಬೆಂಕಿ ಅವಘಡಗಳು ಸಂಭವಿಸುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಬೆಂಕಿ ಅನಾಹುತ ಸಂಭವಿಸುವ ವಸ್ತುಗಳಾದ ಪೆಟ್ರೋಲ್, ಡಿಸೇಲ್, ಪಟಾಕಿ ಮತ್ತು ಇತರೆ ಸ್ಫೋಟಕ ವಸ್ತುಗಳ ಅಧಿಕೃತ ದಾಸ್ತಾನು ಹೊಂದಿರುವವರು ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳಬೇಕು. ಯಾವುದೇ ಅನಾಹುತಗಳು ಸಂಭವಿಸದಂತೆ ಜಾಗೃತರಾಗಿದ್ದು ಅದಕ್ಕೆ ಸಂಬಂಧಿಸಿದಂತೆ ಅಗತ್ಯವಿರುವ ಅಗ್ನಿಶಾಮಕ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದು ಸೂಚಿಸಿದೆ. ಒಂದು ವೇಳೆ ಬೇಜಾವಬ್ದಾರಿಯಿಂದಾಗಿ ಅನಾಹುತಗಳು ಸಂಭವಿಸಿದಲ್ಲಿ ಸಂಬಂಧಪಟ್ಟವರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಕೆ. ವಿದ್ಯಾ ಕುಮಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣದಲ್ಲಿ ನಿನ್ನೆ ವಶಕ್ಕೆ ಪಡೆದಿದ್ದ ವಕೀಲ ಹಾಗೂ ಬಿಜೆಪಿ ಮುಖಂಡ ದೇವರಾಜೇಗೌಡರನ್ನು ಇಂದು ಪೊಲೀಸರು ಬಂಧಿಸಿದ್ದಾರೆ. ಚಿತ್ರದುರ್ಗ ಬಳಿಯ ಕೆ.ಆರ್. ಹಳ್ಳಿ ಗೇಟ್ ಬಳಿ ಹಿರಿಯೂರು ಗ್ರಾಮಾಂತರ ಪೊಲೀಸರು ದೇವರಾಜೇಗೌಡ ಅವರನ್ನು ನಿನ್ನೆ ವಶಕ್ಕೆ ಪಡೆದಿದ್ದರು. ಹೊಳೆ ನರಸೀಪುರ ಠಾಣೆಯಲ್ಲಿ ದಾಖಲಾಗಿದ್ದ ಎರಡು ಕೇಸ್ ಗಳ ಹಿನ್ನೆಲೆಯಲ್ಲಿ ಅವರನ್ನು ವಶಕ್ಕೆ ಪಡೆಯಲಾಗಿತ್ತು. ವಕೀಲರಾಗಿರುವ ದೇವರಾಜೇಗೌಡ ವಿರುದ್ಧ ಏಪ್ರಿಲ್ ೧ರಂದು ಹೊಳೆನರಸೀಪುರ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿತ್ತು. ಹಾಸನ ಜಿಲ್ಲೆಯ ೩೬ ವರ್ಷದ ಮಹಿಳೆಯೊಬ್ಬರು ತಮ್ಮ ಆಸ್ತಿ ಮಾರಾಟಕ್ಕೆ ಸಹಾಯ ಮಾಡುವ ನೆಪದಲ್ಲಿ ದೇವರಾಜೇಗೌಡ ತನಗೆ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ೨೦೨೩ರ ವಿಧಾನಸಭಾ ಚುನಾವಣೆಯಲ್ಲಿ ಹೊಳೆನರಸೀಪುರ ಶಾಸಕ ಹೆಚ್.ಡಿ ರೇವಣ್ಣ ವಿರುದ್ಧ ಸ್ಪರ್ಧಿಸಿದ್ದ ದೇವರಾಜೇಗೌಡ, ಮಹಿಳೆಯರ ಮೇಲಿನ ದೌರ್ಜನ್ಯದ ವೀಡಿಯೊಗಳನ್ನು ಸೋರಿಕೆ ಮಾಡಿದ್ದಕ್ಕಾಗಿ ರಾಜ್ಯದ ಕಾಂಗ್ರೆಸ್ ನಾಯಕರನ್ನು ದೂಷಿಸಿದ್ದರು.

<><*<><>*><>

ಮಹಾರಾಷ್ಟ್ರದ ಸಾಂಗೋಲಾ-ಜತ್ತ ಮಾರ್ಗದ ಬಳಿ ಕ್ರೂಜರ್ ವಾಹನ ಪಲ್ಟಿಯಾಗಿದ್ದು ಬೆಳಗಾವಿಯ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಥಣಿ ತಾಲೂಕಿನ ಬಳ್ಳಿಗೇರಿ ಗ್ರಾಮದ ಮಹಿಳೆಯರು ಕೂಲಿ ಅರಿಸಿ  ಸಾಂಗೋಲಾ ಕಡೆಗೆ ಹೋಗುವಾಗ ರಸ್ತೆ ಮಧ್ಯೆ  ಅವಘಡ ಸಂಭವಿಸಿದೆ. ಬಳ್ಳಿಗೇರಿ ಗ್ರಾಮದ ನಿವಾಸಿಗಳಾದ ಮಹಾದೇವಿ ಚೌಗಲಾ, ಗೀತಾ ದೊಡಮನಿ, ಮಲಬಾದ ಗ್ರಾಮದ ಕಸ್ತೂರಿ ಮೃತ ದುರ್ದೈವಿಗಳು.  ಇಬ್ಬರ ಸ್ಥಿತಿ ಗಂಭೀರವಾಗಿದ್ದು ಅವರನ್ನ ಮಿರಜ್ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

**<><*<><>*><>**

ದೇಶದ ಕೇಂದ್ರ, ಪೂರ್ವ ಮತ್ತು ದಕ್ಷಿಣದ ವಿವಿಧ ಭಾಗಗಳಲ್ಲಿ ಇಂದಿನಿಂದ ಸೋಮವಾರದವರೆಗೆ ಗುಡುಗು, ಮಿಂಚು ಸಹಿತ ಸಾಧಾರಣ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.  ಬೆಂಗಳೂರಿನಲ್ಲಿ ಮುಂದಿನ ೪೮ ಗಂಟೆಗಳಲ್ಲಿ ಸಂಜೆ ಇಲ್ಲವೇ ರಾತ್ರಿ ವೇಳೆಗೆ ಮಳೆಯಾಗುವ ಸಾಧ್ಯತೆಯಿದೆ.  ಗರಿಷ್ಠ ೩೨ ಡಿಗ್ರಿ ಸೆಲ್ಸಿಯೆಸ್, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.
ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಜಿಲ್ಲೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ಗುಡುಗು ಸಹಿತ ಸಾಧಾರಣ ಮಳೆಯಾಗಲಿದೆ. ಗಂಟೆಗೆ ೪೦ ರಿಂದ ೫೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಹಾಸನ, ದಾವಣಗೆರೆ, ಮಂಡ್ಯ, ಮೈಸೂರು, ಚಾಮರಾಜನಗರ, ಹಾವೇರಿ, ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯ ಹಲವು ಭಾಗಗಳಲ್ಲಿ ಬಿರುಗಾಳಿ ಸಹಿತ ಸಾಧಾರಣ ಮಳೆಯಾಗಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ. ರಾಜ್ಯದಲ್ಲಿ ಗರಿಷ್ಠ ಉಷ್ಣಾಂಶ ೩೯ ಡಿಗ್ರಿ ಸೆಲ್ಸಿಯೆಸ್ ರಾಯಚೂರಿನಲ್ಲಿ ದಾಖಲಾಗಿದೆ. ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಮತ್ತು ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿಯಲ್ಲಿ ಒಣ ಹವೆ ಇತ್ತು. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ೯ ಸೆಂಟಿಮೀಟರ್ ಮಳೆಯಾಗಿದೆ. ಉಳಿದಂತೆ ಗುಬ್ಬಿ, ಮಂಡ್ಯ, ಕೃಷ್ಣರಾಜಸಾಗರದಲ್ಲಿ ೬ ಸೆಂಟಿಮೀಟರ್, ಮೈಸೂರಿನಲ್ಲಿ ೫, ಬೆಂಗಳೂರಿನ ಹೆಸರಘಟ್ಟದಲ್ಲಿ ೪, ಚಿಕ್ಕಬಳ್ಳಾಪುರದಲ್ಲಿ ೩, ದಾವಣಗೆರೆ ಸಂತೇಬೆನ್ನೂರು, ಚಿತ್ರದುರ್ಗ, ಬೆಳಗಾವಿ ವಿಮಾನ ನಿಲ್ದಾಣದಲ್ಲಿ, ಅರಕಲಗೂಡು, ಚಿಕ್ಕಮಗಳೂರು, ಭಾಗಮಂಡಲ, ಹೊಸಕೋಟೆಯಲ್ಲಿ ತಲಾ ೨ ಸೆಂಟಿಮೀಟರ್ ಮಳೆಯಾಗಿದೆ. ಬರಪೀಡಿತ ಪಾವಗಡದಲ್ಲಿ ೧ ಸೆಂಟಿ ಮೀಟರ್ ಮಳೆಯಾಗಿರುವ  ಬಗ್ಗೆ ವರದಿಯಾಗಿದೆ.

**<><*<><>*><>**

೧. ಮಕ್ಕಳ ಮಾನಸಿಕ ಮತ್ತು ದೈಹಿಕ ವಿಕಸನದಲ್ಲಿ ಜಾನಪದ ಸಂಸ್ಕೃತಿಯ ಪಾತ್ರ ಬಹಳ ಮುಖ್ಯವಾಗಿದೆ. ರಾಮನಗರದ ಜಾನಪದ ಲೋಕದಲ್ಲಿ ನಡೆದ ಮಕ್ಕಳ ಗ್ರಾಮೀಣ ವಿಕಸನ ಶಿಬಿರದ ಮುಕ್ತಾಯ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಾನಪದ ಪರಿಷತ್ ಕಾರ್ಯಾಧ್ಯಕ್ಷ ಪ್ರೊ. ಹಿ.ಚಿ.ಬೋರಲಿಂಗಯ್ಯ ಮೊಬೈಲ್ ಗಳಿಂದ ಮಕ್ಕಳನ್ನು ಆದಷ್ಟು ದೂರ ಇಡಲು ಪೋಷಕರು ಗಮನಹರಿಸಬೇಕೆಂದು ಕಿವಿಮಾತು ಹೇಳಿದರು.

೨. ಪ್ರಸಕ್ತ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಕೋರ್ಸಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ **"**ಪ್ರಾಂಶುಪಾಲರು**,** ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ**,** ನರಸಾಪೂರ**,** ಗದಗ-ಬೆಟಗೇರಿ**"** ಇವರಿಗೆ ಇದೇ ೩೧ ರೊಳಗೆ ಸಲ್ಲಿಸಬಹುದಾಗಿದೆ.

೩. ಕೋಲಾರದ ವಕ್ಕಲೇರಿ ಗ್ರಾಮದಲ್ಲಿ ೫೦ನೇ ವರ್ಷದ ಹೂವಿನ ಕರಗ ವಿಜೃಂಭಣೆಯಿಂದ ನೆರವೇರಿತು.

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಕೋಲ್ಕತಾದ ಈಡನ್ ಗಾಡರ್ನ್ಸ್ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಕೋಲ್ಕತಾ ನೈಟ್ ರೈಡರ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಮೂರು ವರ್ಷಗಳಲ್ಲಿ ಇದೇ ಮೊದಲ ಬಾರಿ ಪ್ಲೇಆಫ್ ಪ್ರವೇಶಿಸಲು ಸನ್ನದ್ಧವಾಗಿರುವ ಕೊಲ್ಕೊತ್ತಾ ನೈಟ್ ರೈಡರ್ಸ್ ಗೆಲ್ಲುವ ಹುಮ್ಮಸ್ಸಿನಲ್ಲಿದೆ. ಇನ್ನು ಸ್ಪರ್ಧೆಯಿಂದ ಅಧಿಕೃತವಾಗಿ ಹೊರ ಬಿದ್ದಿರುವ ಮುಂಬೈ ತಂಡ ಇಂದು ಗೌರವಕ್ಕಾಗಿ ಹೋರಾಟ ನಡೆಸುವ ಅನಿವಾರ್ಯತೆಯಲ್ಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ **<>*><>**